ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರವಿಂದ ಕುಮಾರ ಅರಳಿ, ಇವರು ಶೂನ್ಯವೇಳೆಯಲ್ಲಿ ನೀಡಿರುವ ಸೂಚನೆಗೆ

ಹೇಳಿಕೆ

ವಿಷಯ:

ರಾಜ್ಯದಲ್ಲಿರುವ ಹಲವಾರು ಇಲಾಖೆಗಳಲ್ಲಿ ಕೆ.ಎ.ಎಸ್. (ಕಿರಿಯ ಶ್ರೇಣಿ) ವೃಂದದ ನೇರ ನೇಮಕಾತಿ ಕೋಟಾದಡಿ ಸುಮಾರು 500ಕ್ಕು ಹೆಚ್ಚು ಹುದ್ದೆಗಳು ಖಾಲಿ ಇದ್ದು, ಇದನ್ನು ಭರ್ತಿ ಮಾಡುವ ವಿಚಾರವನ್ನು ಸದನದಲ್ಲಿ ಶೂನ್ಯವೇಳೆಯಡಿಯಲ್ಲಿ ಪ್ರಸ್ತಾಪಿಸಲು ಅನುಮತಿಯನ್ನು ಕೋರುತ್ತಿದ್ದೇನೆ.

ರಾಜ್ಯದ ವಿವಿಧ ಇಲಾಖೆಗಳಲ್ಲಿ ಕೆಎಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳು ಪ್ರಮುಖವಾಗಿ ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ, ಗೃಹ, ಹಿಂದುಳಿದ ವರ್ಗ, ಸಮಾಜ ಕಲಾಣ, ಸಹಕಾರ ಸೇರಿದಂತೆ ವಿವಿಧ ಇಲಾಖೆಗಳಿಗೆ ಸೇರಿದವಾಗಿರುತ್ತದೆ. ಈ ಖಾಲಿ ಇರುವ ಹುದ್ದೆಗಳಿಂದ ಸರ್ಕಾರದ ಯೋಜನೆಯನ್ನು ಜನರಿಗೆ ತಲುಪಿಸಲು ಸಾಧ್ಯವಾಗದೇ ರಾಜ್ಯದಲ್ಲಿ ಆಗಬೇಕಾದ ಅನೇಕ ಅಭಿವೃದ್ಧಿ ಕಾರ್ಯಕ್ರಮಗಳು ಕುಂಠಿತಗೊಂಡಿದ್ದು, ರಾಜ್ಯದ ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಯನ್ನು ಸಾಧಿಸಲು ಕೇಂದ್ರಿಕೃತ ಮತ್ತು ಸಮಗ್ರ ಕ್ರಮಗಳನ್ನು ಕೈಗೊಳ್ಳಲು ವಿಫಲವಾಗುತ್ತಿದೆ.

ಕಳೆದ 10 ವರ್ಷಗಳಿಂದ ಕೇವಲ ನಾಲ್ಕು ಬಾರಿ ಈ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಿಗೆ ಆಹ್ವಾನಿಸಿದೆ ಯಾದರೂ ಈ ಹುದ್ದೆಗಳಲ್ಲಿ ಆಯ್ಕೆಯಾದವರಲ್ಲಿ 180ಕ್ಕೂ ಹೆಚ್ಚು ಅಭ್ಯರ್ಥಿಗಳು ಹುದ್ದೆಗೆ ವರದಿಯನ್ನು ಮಾಡಿಕೊಳ್ಳದೆ ಇರುವುದರಿಂದ ಈ ಹುದ್ದೆಗಳನ್ನು ಸಹಾ ಖಾಲಿ ಹುದ್ದೆಗಳೆಂದು ಪರಿಗಣಿಸಬೇಕಾಗುತ್ತದೆ. ಪ್ರತಿ ವರ್ಷ ಸರ್ಕಾರವು ರಾಜ್ಯದ ಅಭ್ಯರ್ಥಿಗಳಿಗೆ ಕೋಟ್ಯಾಂತರ ರೂಪಾಯಿ ಅನುದಾನವನ್ನು ಉಚಿತ ಕೆ.ಎ.ಎಸ್ ತರಬೇತಿಗಾಗಿ ನೀಡುತ್ತಿದೆ. ಆದರೆ, ಕಾಲ ಕಾಲಕ್ಕೆ ತೆರವಾಗುವ ಹಾಗೂ ಪ್ರಸ್ತುತ ಖಾಲಿ ಇರುವ ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳನ್ನು ಭರ್ತಿ ಮಾಡಲು ಅಧಿಸೂಚನೆಯನ್ನೇ ಹೊರಡಿಸುತ್ತಿಲ್ಲ. ಆದರೆ, ಪ್ರಸ್ತುತ ಕೇವಲ 43 ಹುದ್ದೆಗಳ ನೇಮಕಾತಿಗೆ ಮಾತ್ರ ಆದಿಸೂಚನೆಯನ್ನು ಹೊರಡಿಸಲು ಕೆಪಿಎಸ್‌ಸಿಗೆ ಪ್ರಸ್ತಾವನೆಯನ್ನು ಕಳುಹಿಸಿರುತ್ತದೆ.

ಆದರೆ, ಪ್ರಸ್ತುತ 500ಕ್ಕೂ ಹೆಚ್ಚು ಹುದ್ದೆಗಳು ವಿವಿಧ ಇಲಾಖೆಗಳಲ್ಲಿ ಖಾಲಿ ಇದ್ದರೂ ಸಹ ಅದನ್ನು ಭರ್ತಿ ಮಾಡದೇ ಇರುವುದು ವಿಪರ್ಯಾಸವಾಗಿದೆ. ಆದ್ದರಿಂದ, ಪ್ರಸ್ತುತ ಕೇವಲ 43 ಹುದ್ದೆಗೆ ನೇಮಕಾತಿಗಾಗಿ ಸಲ್ಲಿಸುರುವ ಪ್ರಸ್ತಾವನೆಯ ಬದಲಾಗಿ ಖಾಲಿ ಇರುವ 500ಕ್ಕೂ ಹೆಚ್ಚು ಹುದ್ದೆಗಳ ನೇಮಕಾತಿಗಾಗಿ ಸರ್ಕಾರವು ಅಧಿಸೂಚನೆಯನ್ನು ಹೊರಡಿಸುವ ಸಲುವಾಗಿ ಸೂಕ್ತ ಕ್ರಮವನ್ನು ತೆಗೆದುಕೊಳ್ಳಲು ಈ ಸದನದ ಮೂಲಕ ಸರ್ಕಾರವನ್ನು ಒತ್ತಾಯಿಸುತ್ತಿದ್ದೇನೆ.

ಹೇಳಿಕೆ

ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ)' ನಿಯಮಗಳು, 1997 ರನ್ವಯ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗಾಗಿ ರಿಕ್ತ ಸ್ಥಾನಗಳ ವಿವರವನ್ನು ನೀಡುವಂತೆ ಸಂಬಂಧಪಟ್ಟ ಆಡಳಿತ ಇಲಾಖೆಗಳನ್ನು ಕೋರಲಾಗಿತ್ತು.

ಸಂಬಂಧಪಟ್ಟ ಆಡಳಿತ ಇಲಾಖೆಗಳು ತುಂಬಬೇಕಾದಂಥಹ ರಿಕ್ತ ಸ್ಥಾನಗಳನ್ನು ಮೀಸಲಾತಿ ಅನ್ವಯ ಗುರುತಿಸಬೇಕಾಗುತ್ತದೆ. ಈ ರೀತಿ ಗುರುತಿಸಲ್ಪಟ್ಟ ರಿಕ್ತ ಸ್ಥಾನಗಳ ತುಂಬುವಿಕೆಗೆ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಸಿ.ಆ.ಸು.ಇಲಾಖೆಗೆ ಆಡಳಿತ ಇಲಾಖೆಗಳು ಪ್ರಸ್ತಾವನೆಯನ್ನು ಕಳುಹಿಸಿ ಕೊಡಬೇಕಾಗಿರುತ್ತದೆ.

ಈ ರೀತಿ ಒಟ್ಟು 43 ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳ ನೇಮಕಾತಿಗಾಗಿ ಕೋರಿ ವಿವಿಧ ಆಡಳಿತ ಇಲಾಖೆಗಳು ಸಿ.ಆ.ಸು.ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತವೆ.

ಅದರಂತೆ ಖಾಲಿ ಇರುವ ಒಟ್ಟು 43 ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಆಯ್ಕೆ ಮಾಡಲು ನೇಮಕಾತಿ ಪ್ರಕ್ರಿಯೆ ನಡೆಸುವಂತೆ ದಿನಾಂಕ 04.11.2022 ರಂದು ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಲೋಕಸೇವಾ ಆಯೋಗವನ್ನು ಕೋರಲಾಗಿರುತ್ತದೆ.

ಸಂಖ್ಯೆ: ಸಿಆಸುಇ 215 ಎಸ್‌ಎಸ್‌ಸಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ